**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ 136 ಜೆ.ಜೆ.ಆರ್ ನಗರ ಬೆಂಗಳೂರು

********************************************************************************

ಸಂಖ್ಯೆ: w-137/Committee/Proceding -35/2021-22 dt. 07-05-2022

## ಸಭೆಯ ನಡವಳಿಗಳು

ಶ್ರೀ ಸತೀಶ್ ಕುಮಾರ್ ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಉಪಸ್ಥಿತಗೊಂಡಿರುವ ಮಾನ್ಯ ಶ್ರೀ. ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ಕಾಮಗಾರಿ) ವಸಂತನಗರ ಉಪ ವಿಭಾಗ ಬಿ.ಬಿ.ಎಂ.ಪಿ, ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 137 ರವರ ಅಧ್ಯಕ್ಷತೆಯಲ್ಲಿ ಸಭೆಯಲ್ಲಿ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು

## ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಬಂದಂತಹ ದೂರುಗಳು ಟ್ರಾಕ್ಟರ್ ಮತ್ತು ಕೂಲಿ ಕಾರ್ಮಿಕರನ್ನು ಉಪಯೋಗಿಸಿಕೊಂಡು ತಕ್ಷಣ ದೂರುಗಳನ್ನು ಪರಿಶೀಲಿಸಿ ಕಾರ್ಯನಿರ್ವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಮಾನ್ಯ ಸದಸ್ಯರು ವಾರ್ಡ್–137ರ ವ್ಯಾಪ್ತಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಎಸ್‌ಸಿ ಜನಗದವರಿದ್ದು 24.10% ಅನುದಾನದಲ್ಲಿ ಮನೆ ನಿರ್ಮಾಣ ಹಂತದಲ್ಲಿರುವ ಬಿಲ್ಲುಗಳನ್ನು ಸಲ್ಲಿಸಿದು ಆದರೆ ಬಿಲ್ಲುಗಳಿಗೆ ಹಣ ಪಾವತಿಯಾಗದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

Scanned with CamScanner

ಸದರಿ ವಿಷಯದ ಬಗ್ಗೆ ಮಾನ್ಯ ಅಧ್ಯಕ್ಷರು ವಿವರಣೆಯನ್ನು ನೀಡುವಂತೆ ಸಹಾಯಕ ಅಭಿಯಂತರರಿಗೆ ತಿಳಿಸಿದರು.

ಸಹಾಯಕ ಅಭಿಯಂತರರು ವಾರ್ಡ್-137 ವ್ಯಾಪ್ತಿಯಲ್ಲಿ 2019-20ರ ಸಾಲಿನಲ್ಲಿ ಸುಮಾರು 30 ಜನ ಫಲಾನುಭವಿಗಳಿಗೆ ಕಾರ್ಯದೇಶ ನೀಡಿದ್ದು ಹಾಗೂ ಹಿಂದಿನ ದಿನಗಳಲ್ಲಿ ನೀಡಿದ್ದ ಕಾರ್ಯದೇಶಗಳನ್ವಯ ಸುಮಾರು ಮನೆ ನಿರ್ಮಿಸುತ್ತಿದು ಕೋವಿಡ್-19 ಹಾಗೂ ಇತರೆ ಸಮಸ್ಯೆಗಳಿಂದ ಬಿಲ್ ಪಾವತಿ ವಿಳಂಬವಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಸಭೆಯಲ್ಲಿ ವಿವರಣೆ ಮತ್ತು ಕೈಗೊಂಡಿರುವ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು.

ಆರೋಗ್ಯ ಪರಿವೀಕ್ಷಕರು ವಾಡ್-137 ಕೋವಿಡ್-19 ನಾಲ್ಕನೇ ಅಲೆಯ ವೈರಸ್ ರೋಗಣುಗಳು ಹರಡುತ್ತಿರುವ ಬಗ್ಗೆ ಸಾರ್ವಜನಿಕರಲ್ಲಿ ಸರ್ಕಾರದ ಆದೇಶದಂತೆ ಜಾಗೃತಿ ಮೂಡಿಸುತ್ತಿದ್ದು ಹಾಗೂ ಮುಖಗವಚವನ್ನು ಧರಿಸುವುದನ್ನು ಖಡ್ಡಯ ಮಾಡಿರುವುದನ್ನು

ಸಾರ್ವಜನಿಕರಿಗೆ ತಿಳುಸುತ್ತಿದ್ದು ಮುಂದಿನ ದಿನಗಳಲ್ಲಿ ಸರ್ಕಾರದ ಆದೇಶದತೆ ಮುಖಗವಚ ದರಿಸದೆ ಸಾರ್ವಜನಿಕ ಸ್ಥಳಗಳಲ್ಲಿ ತಿರುಗಾಡುತ್ತಿರುವವರಿಗೆ ನಿಯಮದಂತೆ ದಂಡ ವಿಧಿಸಲಾಗುವುದು.

ಸಾರ್ವಜನಿಕರು ಸೇರುವಂತಹ ಮಾಲ್ ಮತ್ತು ಚಿತ್ರಮಂದಿರಗಳಿಗೆ ಪ್ರವೇಶಿಸುವಂತಹ ಸಾರ್ವಜನಿಕರಿಗೆ 2 ಡೋಸ್ ಖಡ್ಡಯವಾಗಿರುತ್ತದೆ ಎಂದು ಸಾರ್ವಜನಿಕರಿಗೆ ತಿಳಿಸಲಾಗುವುದು.

12 ವರ್ಷದಿಂದ ಮೇಲ್ಪಟ್ಟ ಎಲ್ಲಾರಿಗೂ ಲಸಿಕೆಯನ್ನು ಸರ್ಕಾರದ ಮಾರ್ಗ ಸೂಚಿಯಂತೆ ನೀಡುತ್ತಿರುವುದನ್ನು ಸಭೆಯಲ್ಲಿ ತಿಳಿಸಿದರು ಹಾಗೂ ಬೂಸ್ಟರ್ ಡೋಸ್‌ಗಳನ್ನು ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಬಿ.ಬಿ.ಎಂ.ಪಿ ಸಭೆಯಲ್ಲಿ ಹಾಜರಾಗಿದ್ದ ಕಂದಾಯ ನಿರೀಕ್ಷಕರನ್ನು ಹಿಂದಿನ ತಿಂಗಳಿನಲ್ಲಿ ವಸೂಲತಿಯಾದ ತೆರಿಗೆಯ ಬಗ್ಗೆ ಸಭೆಯಲ್ಲಿ ಕೋರಿದರು.

---3

Scanned with CamScanner

ಮಾನ್ಯ ಕಂದಾಯ ನಿರೀಕ್ಷರು ವಾರ್ಡ್-137ರಲ್ಲಿ ವಸೂಲಾದ ತೆರಿಗೆ ಬಗ್ಗೆ ಸಭೆಯಲ್ಲಿ ತಿಳಿಸಿದರು ಹಾಗೂ ಶೇ.5 ತೆರಿಗೆ ವಿನಾಯಿತಿಯನ್ನು ಇನ್ನು ಒಂದು ತಿಂಗಳು ವಿಸ್ತರಣೆ ಮಾಡಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಡಬ್ಲೂಎಸ್ಎಸ್‌ಬಿ ಕಛೇರಿಗೆ ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು.

ಬಿಡಬ್ಲೂಎಸ್ಎಸ್‌ಬಿ ಅಧಿಕಾರಿಗಳು ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಅಧ್ಯಕ್ಷರು ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾ.ನಿ) ಚಾಮರಾಜಪೇಟೆ ರವರ ಪ್ರತಿ ನಿಧಿಯನ್ನು ವಾರ್ಡ್ ಘನ ತ್ಯಾಜ್ಯ ನಿರ್ವಹಣೆ, ಕಸ ವಿಲೇವಾರಿ, ಮತ್ತು ವಾಹನ ಮತ್ತು ಪೌರ ಕಾರ್ಮಿಕರ ಹಾಜರಾತಿ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -137ರ ವ್ಯಾಪ್ತಿಯಲ್ಲಿ ಬರುವ ಗುತ್ತಿಗೆ ಪೌರ ಕಾರ್ಮಿಕರ ಮತ್ತು ವಾಹನಗಳ ಹಾಜರಾತಿ ಬಗ್ಗೆ ತಿಳಿಸಿದರು ಹಾಗೂ ಕೆಲವು ಕಡೆ ಬ್ಲಾಕ್ ಪಾಯಿಂಟ್‌ಗಳು ಅಪರಿಚಿತ ವ್ಯಾಕ್ತಿಗಳು ರಸ್ತೆಯಲ್ಲಿ ಕಸ ಎಸೆದು ಹೋಗುತ್ತಿರುವುದು ಕಂಡಬರುತ್ತಿದ್ದು ಸದರಿ ಸ್ಥಳಗಳಲ್ಲಿ ಮಾರ್ಷಲ್‌ಗಳನ್ನು ನಿಯೋಜಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಮಾನ್ಯ ಸದಸ್ಯರು ವಾರ್ಡ್-137ರ ವ್ಯಾಪ್ತಿಯಲ್ಲಿ ಹಲವು ರೀತಿಯಲ್ಲಿ ಬೇಸ್ಕಂಗೆ ಸಂಬಂಧಿಸಿದ ದೂರುಗಳು ಬಗ್ಗೆ ತುರ್ತಾಗಿ ಕಾರ್ಯನಿರ್ವಹಿಸುವಂತೆ ಸಭೆಯಲ್ಲಿ ಕೋರಿದರು.

ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿದಿಯು ಬೇಸಿಗೆ ಕಾಲದಲ್ಲಿ ಲೊಡ್ ಸೆಡ್ಡಿಂಗ್ ಜಾರಿಯಲ್ಲಿದ್ದು ಕೆಲವು ಕಾಲ ವಿದ್ಯುತ್ ಸರಬರಾಜಿನಲ್ಲಿ ವಿತವ್ಯಯದ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಬ್ಯಾನರ್-ಬಂಟಿಂಗ್ ಹಾವಳಿ ಹೆಚ್ಚಗಿದ್ದು ತೆರವುಗೊಳಿಸಲು ಸಭೆಯಲ್ಲಿ ಕೋರಿದರು.

---4

Scanned with CamScanner

ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ... ಮತ್ತು ಇತರೆ ಹಬ್ಬಗಳಿಗೆ ಶುಭ ಕೋರಲು ಹಾಕಿದ್ದ ಬಂಟಿಂಗ್‌ಗಳನ್ನು ತೆರವುಗೊಳಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ 137ರ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ವಿಧಿಸಿದ ದಂಡದ ವಿವರವನ್ನು ಕೋರಿದರು.

ವಾರ್ಡ್–136ರ ಮಾರ್ಷಲ್ ಗಳು ಒಟ್ಟು ವಿಧಿಸಿದ ದಂಡ ರೂ. 2500 ಎಸ್‌ಡಬ್ಲ್ಯೂಎಂ. ದಂಡ ರೂ. 3000 ಎಂದು ಸಭೆಯಲ್ಲಿ ತಿಳಿಸಿದರು ಸದರಿ ಹಣವನ್ನು ಮುಖ್ಯ ಕಛೇರಿಗೆ ಸಲ್ಲಿಸಿರುತ್ತಾರೆ.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಗೆ ಬರುವ ಆರಕ್ಷಕ ನೀರಿಕ್ಷಕರು(ವಾರ್ಡ್‌ನಲ್ಲಿ ಕಾನೂನು ಮತ್ತು ಸುವ್ಯವಸ್ಥೆ) ಪ್ರತಿನಿಧಿಯನ್ನು ವಾರ್ಡ್ ಸಂಖ್ಯೆ: 137ರಲ್ಲಿ ಜೆ.ಜೆ.ಆರ್ ನಗರ ಕಾನೂನು ಸುವ್ಯವಸ್ಥೆಯನ್ನು ಉತ್ತಮಗೊಳಿಸಲು ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ಕೋರಿದರು.

ಆರಕ್ಷಕ ನೀರಿಕ್ಷಕರು(ವಾರ್ಡ್‌ನಲ್ಲಿ ಕಾನೂನು ಮತ್ತು ಸುವ್ಯವಸ್ಥೆ) ಪ್ರತಿನಿಧಿಯು ವಾರ್ಡ್‌ನಲ್ಲಿ ಹೆಚ್ಚಿನ ಪ್ರಮಾಣದ ಅಗತ್ಯಬಿದ್ದ ಕಡೆಯಲ್ಲಿ ಸಿಸಿ ಟಿ.ವಿ ಅಳವಡಿಸಿದ್ದು ಹಾಗೂ ಮುಂದಿನ ದಿನಗಳಲ್ಲಿ ಬಿ.ಬಿ.ಎಂ.ಪಿ ವತಿಯಿಂದ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಸಿ.ಸಿ. ಟಿವಿಯನ್ನು ಅಳವಡಿಸಿ ಹಾಗೂ ಹೆಚ್ಚಿನ ಪೊಲೀಸ್ ಗಸ್ತನ್ನು ಹೆಚ್ಚಿಸಿ ಹಾಗೂ ಸಮಾಜದಲ್ಲಿ ಆಶಾಂತಿ ಉಂಟುಮಾಡುವ ಸಮಾಜ ಘಾತಕರನ್ನು ನೇರದುಂಡಿದು ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಗೆ ಬರುವ ಆರಕ್ಷಕ ನೀರಿಕ್ಷಕರು(ಸಂಚಾರಿ ವಿಭಾಗ) ಪ್ರತಿನಿಧಿಯನ್ನು ವಾರ್ಡ್ ಸಂಖ್ಯೆ: 137 ರಾಯಮಂ ವ್ಯಾಪ್ತಿಯ ಅವಶ್ಯಕವಾಗಿ ಕೈಗೊಳ್ಳಬೇಕಾದ ಕ್ರಮದ ಬಗ್ಗೆಸಭೆಯಲ್ಲಿ ವಿವರಣೆ ಕೋರಿದರು.

ಆರಕ್ಷಕ ನೀರಿಕ್ಷಕರು(ಸಂಚಾರಿ ವಿಭಾಗ) ಪ್ರತಿನಿಧಿಯು ವಾರ್ಡ್ ಸಂಖ್ಯೆ: 137 ರಾಯಮಂ ನಗರ ವ್ಯಾಪ್ತಿಯಲ್ಲಿ ಜೆ.ಜೆ. ಆರ್ ಮುಖ್ಯರಸ್ತೆ, ಹಾಗೂ ಮೈಸೂರು ರಸ್ತೆಗಳಲ್ಲಿ ದಿನ ನಿತ್ಯ ವಾಹನ ತಪಾಸಣೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.



Scanned with CamScanner

# ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ವಸಂತನಗರ ಉಪ ವಿಭಾಗ) ಬಿ.ಬಿ.ಎಂ.ಪಿ., ದೂ. ಸಂಖ್ಯೆ: 9845720286 | ಅಧ್ಯಕ್ಷರು ಮತ್ತು ವಾರ್ಡ್‌ನ ನೋಡಲ್ ಅಧಿಕಾರಿ | |
| 2 | ಶ್ರೀ [redacted] ಸತೀಶ್ ಕುಮಾರ್ .ಬಿ<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 137<br>ಬಿ.ಬಿ.ಎಂ.ಪಿ., ದೂ. ಸಂ [redacted] 9986740582 | ಸದಸ್ಯ ಕಾರ್ಯದರ್ಶಿ | |
| 3 | ಗೀತಾ ಹೆಚ್. ದೂ. 9986537126<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -137 | ಸದಸ್ಯರು | |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ರವರ ಪ್ರತಿನಿಧಿ ಶ್ರೀ ಬಾಬು (ಕೆಲಸ ಪರಿವೀಕ್ಷಕರು) ವಾರ್ಡ್-137, ದ ದೂ. 9342582372 | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಾಜಪೇಟೆ ವಿಭಾಗ ರವರ ಪ್ರತಿನಿಧಿ<br>ಬಸವಲಿಂಗಯ್ಯ ದೂ. 9686418488 | ಸದಸ್ಯರು | |
| 6 | ಶ್ರೀ ಸಿ. ಆರ್ ರವಿ ಪ್ರಸಾದ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ.<br>ದೂ. 9845802912 | ಸದಸ್ಯರು | |
| 7 | ಶ್ರೀ ರಿಜ್ವಾನ್,<br>ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ.<br>ದೂ. 9845262860 | ಸದಸ್ಯರು | |
| 8 | ಶ್ರೀ ರಾಜು, ದೂ.. 7676512877<br>ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. | ಸದಸ್ಯರು | |
| 9 | ಶ್ರೀಮತಿ ಆಶಾ. ದೂ. 9731317223<br>ಕಂದಾಯ ಪರಿವೀಕ್ಷಕರು | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ | ಸದಸ್ಯರು | |
| 11 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>ಶ್ರೀ ಕುಮಾರ್ ಸ್ವಾಮಿ, ದೂ. 9060341644 | ಸದಸ್ಯರು | |
| 12 | ಸಹಾಯಕ ಕಾರ್ಯ ಪಾಲಕ ಅಭಿಯಂತರರು (ಬೆಸ್ಕಾಂ) ರವರ ಪ್ರತಿನಿಧಿ.<br>ದೂ. 9449840364 | ಸದಸ್ಯರು | |
| 13 | ಮಾಗಡಿ ರಸ್ತೆ ಸಂಚಾರ ಪೊಲೀಸ್ ಠಾಣೆ ಯ ಪ್ರತಿನಿಧಿ<br>ಶ್ರೀ ರಾಮಚಂದ್ರ ಎ. ಎ.ಎಸ್.ಐ ದೂ.9902992624 | ಸದಸ್ಯರು | |
| 14 | ಜೆ.ಜೆ.ಆರ್ ನಗರ ಪೊಲೀಸ್ ಠಾಣೆ ಯ ಪ್ರತಿನಿಧಿ | ಸದಸ್ಯರು | |

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ: 137
ವಾರ್ಡ್ ಹಂತದ ಸಮಿತಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 137

Scanned with CamScanner